**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2016-17ನೇ ಸಾಲಿನ ಪ್ರಗತಿಯನ್ನು ಆಧರಿಸಿ 2018ನೇ ಸಾಲಿನಲ್ಲಿ "ನಾನಾಜಿ ದೇಶ್‌ಮುಖ್ ರಾಷ್ಟ್ರೀಯ ಗೌರವ ಗ್ರಾಮ ಸಭಾ ಪುರಸ್ಕಾರ"ದಡಿ ರಾಜ್ಯದ ದಕ್ಷಿಣಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನ ಬೊಳಂತೂರು ಗ್ರಾಮ ಪಂಚಾಯತಿಗೆ ಘೋಷಣೆಯಾಗಿರುವ ಪ್ರೋತ್ಸಾಹಕ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

ಸರ್ಕಾರದ ಅಧೀನ ಕಾರ್ಯದರ್ಶಿ, ಪಂಚಾಯತ್ ರಾಜ್ ಮಂತ್ರಾಲಯ(ಗೌರ್‌ನೆನ್ಸ್ ವಿಭಾಗ), ಭಾರತ ಸರ್ಕಾರ ಇವರ ಪತ್ರ ಸಂಖ್ಯೆ N-11019/28/2017-Governance(iii), ದಿನಾಂಕ:20-08-2018.

**ಪ್ರಸ್ತಾವನೆ:**

ಮೇಲೆ ಓದಲಾದ ಭಾರತ ಸರ್ಕಾರದ ಬಿಡುಗಡೆ ಆದೇಶ ಪತ್ರದ ಮೂಲಕ ರಾಜ್ಯದ "ನಾನಾಜಿ ದೇಶ್‌ಮುಖ್ ರಾಷ್ಟ್ರೀಯ ಗೌರವ ಗ್ರಾಮ ಸಭಾ ಪುರಸ್ಕಾರ"ಪ್ರಶಸ್ತಿಯನ್ನು ಘೋಷಣೆ ಮಾಡಲಾಗಿದೆ. ಅದರಂತೆ, ದಕ್ಷಿಣಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನ ಬೊಳಂತೂರು ಗ್ರಾಮ ಪಂಚಾಯತಿಯು ಭಾರತ ಸರ್ಕಾರದ ರಾಷ್ಟ್ರೀಯ ಗೌರವ ಗ್ರಾಮ ಸಭಾ ಪುರಸ್ಕಾರಕ್ಕೆ ಭಾಜನವಾಗಿದೆ. ಈ ಗ್ರಾಮ ಪಂಚಾಯತಿಗೆ ರೂ.10.00 ಲಕ್ಷಗಳ (ಹತ್ತು ಲಕ್ಷ ರೂಪಾಯಿಗಳು ಮಾತ್ರ) ನಗದು ಬಹುಮಾನವನ್ನು ಘೋಷಿಸಲಾಗಿದೆ. ಘೋಷಿಸಲಾದ ನಗದು ಬಹುಮಾನವನ್ನು ಈ ಗ್ರಾಮ ಪಂಚಾಯತಿಗೆ ವಿತರಿಸುವ ಕುರಿತು ಸರ್ಕಾರದ ಆದೇಶವನ್ನು ಹೊರಡಿಸುವ ಅಗತ್ಯವಿದೆ ಅದಕ್ಕಾಗಿ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 256 ಜಿಪಸ 2017 ಬೆಂಗಳೂರು, ದಿನಾಂಕ:10-10-2018</u>**

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, ಕರ್ನಾಟಕ ರಾಜ್ಯದ ದಕ್ಷಿಣಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನ ಬೊಳಂತೂರು ಗ್ರಾಮ ಪಂಚಾಯತಿಗೆ ನಗದು ಬಹುಮಾನ ಮೊತ್ತವಾಗಿ ರೂ.10.00 (ಹತ್ತು ಲಕ್ಷ ರೂಪಾಯಿಗಳು ಮಾತ್ರ) ಲಕ್ಷಗಳನ್ನು 2016-17ನೇ ಸಾಲಿನ ಪ್ರಗತಿಯನ್ನು ಆಧರಿಸಿ 2018ನೇ ಸಾಲಿನಲ್ಲಿ ಭಾರತ ಸರ್ಕಾರದ "ನಾನಾಜಿ ದೇಶ್‌ಮುಖ್ ರಾಷ್ಟ್ರೀಯ ಗೌರವ ಗ್ರಾಮ ಸಭಾ ಪುರಸ್ಕಾರ"ದ ಘೋಷಣೆಯಾಗಿರುವ ಪ್ರೋತ್ಸಾಹಕ ಅನುದಾನವನ್ನು ವಿತರಿಸಲು ಆದೇಶಿಸಿದೆ.

ರಾಜೀವ್ ಗಾಂಧಿ ಪಂಚಾಯತಿ ಸಶಕ್ತಿಕರಣ ಅಭಿಯಾನ (ಆರ್.ಜಿ.ಪಿ.ಎಸ್.ಎ) ಯೋಜನೆಯಡಿ ರಾಜ್ಯ ಸರ್ಕಾರದ ವತಿಯಿಂದ ಇಂದಿರಾನಗರ ದೇನಾ ಬ್ಯಾಂಕ್ ಶಾಖೆಯಲ್ಲಿ ತೆರೆಯಲಾಗಿರುವ ಉಳಿತಾಯ ಖಾತೆ ಸಂಖ್ಯೆ 052110002648ಯಿಂದ ಪ್ರಶಸ್ತಿಯನ್ನು ಪಡೆದ ಈ ಕೆಳಕಂಡ ಗ್ರಾಮ ಪಂಚಾಯತಿಗೆ ನಗದು ಬಹುಮಾನವನ್ನು ಅದರ 14ನೇ ಹಣಕಾಸು ಆಯೋಗದ ಅನುದಾನಕ್ಕಾಗಿ ತೆರೆದಿರುವ ಬ್ಯಾಂಕ್‌ನ ಉಳಿತಾಯ ಖಾತೆಗೆ ವರ್ಗಾಯಿಸಲು ಆದೇಶಿಸಿದೆ. ಈ ಅನುದಾನವನ್ನು ನಾನಾಜಿ ದೇಶ್‌ಮುಖ್ ರಾಷ್ಟ್ರೀಯ ಗೌರವ ಗ್ರಾಮ ಸಭಾ ಪುರಸ್ಕಾರದಡಿ ಪ್ರತ್ಯೇಕವಾಗಿ ಖಾತೆಯನ್ನು ತೆರೆದು, ಆ ಖಾತೆಯ ಮುಖಾಂತರ ಈ ಯೋಜನೆಯ ಅನುದಾನದ ವ್ಯವಹಾರವನ್ನು ನಡೆಸತಕ್ಕದ್ದು.

| ಕ್ರ.ಸಂ. | ಪ್ರಶಸ್ತಿಗಳನ್ನು ಗಳಿಸಿರುವ ರಾಜ್ಯದ ಪಂಚಾಯತ್ ರಾಜ್ ಸಂಸ್ಥೆ | ಘೋಷಣೆ ಮಾಡಲಾದಂತೆ ವಿತರಿಸಲಾಗುತ್ತಿರುವ ನಗದು ಬಹುಮಾನ (ರೂ. ಲಕ್ಷಗಳಲ್ಲಿ) | 14ನೇ ಹಣಕಾಸು ಆಯೋಗ ಅನುದಾನದ ಉಳಿತಾಯ ಖಾತೆ ಸಂಖ್ಯೆ | ಬ್ಯಾಂಕ್‌ನ ಹೆಸರು ಮತ್ತು ಶಾಖೆ | ಐ.ಎಫ್.ಎಸ್.ಸಿ. ಕೋಡ್ |
|---|---|---|---|---|---|
| 1 | ಬೊಳಂತೂರು ಗ್ರಾಮ ಪಂಚಾಯತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ. | 10.00 | 110501011005997 | ವಿಜಯ ಬ್ಯಾಂಕ್, ಕಲ್ಲಡ್ಕ ಶಾಖೆ. | VIJB0001105 |

ಈ ಆದೇಶದ ಮೂಲಕ ಬಿಡುಗಡೆಗೊಳಿಸಲಾದ ಬಹುಮಾನದ ಮೊತ್ತವನ್ನು ಬಳಸಲು ಈ ಕೆಳಕಂಡ ಮಾರ್ಗಸೂಚಿಗಳ ಅನುಸಾರ ಮಾತ್ರವೇ ಕ್ರಮವಹಿಸತಕ್ಕದ್ದು.

1. ಕಾಮಗಾರಿಗಳ ಅನುಷ್ಠಾನವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ, 1999/2000 ಹಾಗೂ ಇದಕ್ಕೆ ಕಾಲಕಾಲಕ್ಕೆ ಮಾಡಲಾದ ಎಲ್ಲಾ ತಿದ್ದುಪಡಿಗಳ ಅನುಸಾರ ನೆರವೇರಿಸತಕ್ಕದ್ದು.

2. ಕ್ರಿಯಾಯೋಜನೆಯನ್ನು ತಯಾರಿಸುವಾಗ ಗ್ರಾಮೀಣ ಪ್ರದೇಶದ ಜನರ ಜೀವನ ಮಟ್ಟವನ್ನು ಹೆಚ್ಚಿಸಲು ಹಾಗೂ ನಾಗರೀಕ ಸೌಲಭ್ಯಗಳನ್ನು ವೃದ್ಧಿಸುವಂತಹ ಜೀವನೋಪಾಯದ ಬೆಂಬಲ, ಆಸ್ತಿ ಸೃಜನೆ, ನಾಗರೀಕ ಮೂಲಭೂತ ಸೌಲಭ್ಯಗಳ ಸೃಷ್ಠಿ ಹಾಗೂ ನಿರ್ವಹಣೆಗಾಗಿ ಅನುದಾನವನ್ನು ಬಳಸಲು ಸಂಬಂಧಿಸಿದ ಚಟುವಟಿಕೆಗಳನ್ನು ಸೇರ್ಪಡೆಗೊಳಿಸಿಕೊಳ್ಳಬಹುದು.

3. ಗ್ರಾಮ ಪಂಚಾಯತಿಗೆ ಬಿಡುಗಡೆಗೊಳಿಸಿರುವ ಮೊತ್ತದಲ್ಲಿ ಶಾಶ್ವತ ಆಸ್ತಿ ಸೃಜನೆಯಾಗುವಂತಹ ಕಾಮಗಾರಿಗಳನ್ನು ಆದ್ಯತೆ ಮೇರೆಗೆ ಕೈಗೆತ್ತಿಕೊಂಡು ಅನುಷ್ಠಾನಗೊಳಿಸಬಹುದು. ಈ ಆಸ್ತಿಗಳ ಸೃಜನೆಯಿಂದಾಗಿ ಗ್ರಾಮ ಪಂಚಾಯತಿಗೆ ನಿಗಧಿತ ಆದಾಯ ಬರುವಂತಹ ಕಾಮಗಾರಿಗಳಿಗೆ ಹೆಚ್ಚು ಆದ್ಯತೆ ನೀಡಬಹುದು.

4. ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಗೊಳಿಸಿದ ಅನುದಾನವು "ನಮ್ಮ ಗ್ರಾಮ ನಮ್ಮ ಯೋಜನೆ"ಯ ರಾಷ್ಟ್ರೀಯ ಪುರಸ್ಕಾರದ ವಿಶೇಷ ಉದ್ದೇಶಗಳನ್ನು ಈಡೇರಿಸಲು ಬಳಸಿಕೊಳ್ಳುವುದು. ನಾಗರೀಕರಿಗೆ ಸೌಲಭ್ಯಗಳನ್ನು ಒದಗಿಸುವ ಉದ್ದೇಶದಿಂದ ಗ್ರಾಮ ಸಭೆ/ವಾರ್ಡ್ ಸಭೆ/ಮಹಿಳಾ ಸಭೆಗಳನ್ನು ಆಯೋಜಿಸುವುದು.

5. ಕಾಮಗಾರಿಗಳ ಅನುಷ್ಠಾನದಲ್ಲಿ ಉತ್ತಮ ಗುಣಮಟ್ಟವನ್ನು ಕಾಯ್ದುಕೊಳ್ಳುವುದು.

6. ನಗದು ಬಹುಮಾನವನ್ನು ಬಾಕಿ ಉಳಿಸದೇ ಬಿಡುಗಡೆಗೊಳಿಸಿದ ಪೂರ್ಣ ಮೊತ್ತಕ್ಕೆ ಕ್ರಿಯಾ ಯೋಜನೆಯನ್ನು ತಯಾರಿಸಿ ಅನುಷ್ಠಾನಗೊಳಿಸತಕ್ಕದ್ದು. ಈ ಕ್ರಿಯಾಯೋಜನೆಯು ಆಯಾ ಪಂಚಾಯತಿ ಸಂಸ್ಥೆಯ ಆಯವ್ಯಯ ಮತ್ತು ಅಭಿವೃದ್ಧಿ ಯೋಜನೆಯ ಭಾಗವಾಗಿರಬೇಕು.

7. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳನ್ನು ರೂಪಿಸಿದ ನಂತರ ಯೋಜನೆಗಳಲ್ಲಿ ಕಂಡುಬರುವ ಅಂತರಗಳನ್ನು ಕಡಿಮೆ ಮಾಡಲು ಬಳಸುವುದು.

8. ನಗದು ಬಹುಮಾನದ ಶೇಖಡ 25ರಷ್ಟನ್ನು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವರ್ಗಗಳ ಕಲ್ಯಾಣಕ್ಕೆ ವಿನಿಯೋಗಿಸತಕ್ಕದ್ದು ಹಾಗೆಯೇ ಶೇಕಡ 3ರಷ್ಟನ್ನು ವಿಕಲಚೇತನರಿಗೆ ವಿನಿಯೋಗಿಸುವುದು.

9. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ (3) ಹಾಗೂ 3(ಎ) ಪ್ರಕಾರ ವಾರ್ಡ್ ಸಭೆ ಹಾಗೂ ಗ್ರಾಮ ಸಭೆ ಶಿಫಾರಸ್ಸುಗಳನ್ನು ಆದ್ಯತೆಗನುಸಾರ ಗ್ರಾಮ ಪಂಚಾಯತಿ ಸಭೆಯಲ್ಲಿ ಅಭಿವೃದ್ಧಿ ಯೋಜನೆಯ ಅನುಮೋದನೆ ಪಡೆಯುವುದನ್ನು ಕಡ್ಡಾಯಗೊಳಿಸಿದೆ.

10. ಪ್ರಗತಿ ವರದಿಯನ್ನು ಪಂಚತಂತ್ರ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವುದು ಹಾಗೂ ಹಣ ಬಳಕೆ ನಮೂನೆ ಪತ್ರ (GFR 12–C [(See Rule 239)]) ವನ್ನು ಸರ್ಕಾರಕ್ಕೆ ಸಲ್ಲಿಸುವುದು (ಪ್ರತಿಯನ್ನು ಲಗತ್ತಿಸಿದೆ).

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ವಿ.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ),
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ
ಕರ್ನಾಟಕ ಸರ್ಕಾರದ ಸಚಿವಾಲಯ

10.10.18

ನಿರ್ದೇಶಕರು (ಪಂ.ರಾಜ್–2)
ಗ್ರಾ.ಅ. & ಪಂ.ರಾಜ್ ಇಲಾಖೆ

ಗೆ:

1. ಮಹಾಲೇಖಪಾಲರು (ಎ&ಇ), ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಜಿ&ಎಸ್.ಎಸ್.ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ&ಆರ್ಎಸ್ಎ), ಕರ್ನಾಟಕ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ.

5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬಂಟ್ವಾಳ, ದಕ್ಷಿಣ ಕನ್ನಡ ಜಿಲ್ಲೆ.
6. ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬೋಳಂತೂರು ಗ್ರಾಮ ಪಂಚಾಯತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.
7. ವಿಶೇಷಾಧಿಕಾರಿ, ಜಿಲ್ಲಾ ಪಂಚಾಯತಿ, ಆರ್ಥಿಕ ಇಲಾಖೆ, ಬೆಂಗಳೂರು.
8. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಸರ್ಕಾರದ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
2. ನಿರ್ದೇಶಕರು(ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.